ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಮಹಾರಾಣಿ Cluster ವಿಶ್ವವಿದ್ಯಾನಿಲಯಗಳ ನೌಕರರಿಗೆ ವೇತನ ನೀಡುವ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ) -

ಶ್ರೀ ಕಾಂತರಾಜ್(ಬಿಎಂಎಲ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

06 (178+208) ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮಹಾರಾಣಿ ಕ್ಲಷ್ಟರ್ ವಿಶ್ವವಿದ್ಯಾಲಯವನ್ನು ಯಾವಾಗ ಸ್ಥಾಪನೆ ಮಾಡಲಾಗಿದೆ; ಇದರ ಉದ್ದೇಶಗಳೇನು; ಇದರ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳ ಸಂಖ್ಯೆ ಎಷ್ಟು; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ಒದಗಿಸುವುದು)

(ಆ) ಮಹಾರಾಣಿ ಕ್ಲಷ್ಟರ್ ವಿಶ್ವವಿದ್ಯಾಲಯದಲ್ಲಿ ಗುತ್ತಿಗೆ/ಸಂಚಿತ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಬೋಧಕ, ಬೋಧಕೇತರ ಸಿಬ್ಬಂದಿಗಳಿಗೆ ಕಳೆದ 10 ತಿಂಗಳುಗಳ ಬಾಕಿ ವೇತನ ನೀಡದೆ ಏಕಾಏಕಿ ಅವರುಗಳನ್ನು ತೆಗೆದು ಹಾಕಿರುವುದು ನಿಜವೇ; ಈ ಸಂಬಂಧ ಸರ್ಕಾರ ಈ ಹಿಂದೆ ಸದನದಲ್ಲಿ ವೇತನ ಪಾವತಿ ಮಾಡುವುದಾಗಿ ಭರವಸೆ ನೀಡಿರುವುದು ನಿಜವೇ;

(ಇ) ಸರ್ಕಾರ ತನ್ನ ಭರವಸೆಯಂತೆ ರೂ.54 ಲಕ್ಷಗಳನ್ನು ವೇತನಕ್ಕಾಗಿ ಬಿಡುಗಡೆ ಮಾಡಿದ್ದರೂ ಕೂಡ ಹೊಸದಾಗಿ ನೇಮಕಗೊಂಡ ಕುಲಪತಿಗಳು ಬಾಕಿ ವೇತನವನ್ನು ಪಾವತಿಸದೆ ಎಲ್ಲರನ್ನೂ ಕೆಲಸದಿಂದ ತೆಗೆದು ಹಾಕಿರುವುದು ನಿಜವೇ;

(ಈ) ಸರ್ಕಾರವು ಯಾವ ಕಾಲ ಮಿತಿಯೊಳಗೆ ಇವರಿಗೆ ಬಾಕಿ ವೇತನ ಪಾವತಿಸುವುದರೊಂದಿಗೆ ಹಾಲಿ ಕೆಲಸ ನಿರ್ವಹಿಸುತ್ತಿರುವ ಹುದ್ದೆಯಲ್ಲಿಯೇ ಮುಂದುವರೆಸಲು ಆದೇಶ ಹೊರಡಿಸುವುದು?